ಜಂಟಿ ನಿರ್ದೇಶಕರು (ನಗರ ಯೋಜನೆ) ಉತ್ತರ
ನಂ. ೦೦/08/22-23
ದಿನಾಂಕ 16/6/22
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ: BBMP/Addl.Dir/JD NORTH/LP/0082/2019-20 ದಿನಾಂಕ: 16-06-2022

## ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ)

ವಿಷಯ: ಆಸ್ತಿ ಖಾತಾ ಸಂಖ್ಯೆ: 589, ನಾಗೊಂಡನಹಳ್ಳಿ ಗ್ರಾಮದ ಸರ್ವೆ ನಂ. 107(ಪಿ), 115/2, 1153, 115/4, 115/5, 116/3 ಮತ್ತು ಹಗದೂರು ಗ್ರಾಮದ ಸರ್ವೆ ನಂ. 30/6(ಪಿ), ವಾರ್ಡ್ ಸಂಖ್ಯೆ: 84, ವೈಟ್‌ಪೀಲ್ಡ್ ಉಪ–ವಿಭಾಗ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ಮಹದೇವಪುರ ವಲಯ, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ವಿಂಗ್ – 1 ರಿಂದ 8 ರ ವಸತಿ ಸಮುಚ್ಚಯ ಉಪಯೋಗದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/ Addl.Dir/ JDNORTH/ LP/0082/2019-20 ರಂತೆ ದಿನಾಂಕ: 07-11-2020

2) ತಮ್ಮ ಮನವಿ ಪತ್ರ ದಿನಾಂಕ: 18-05-2022

* * * * * * *

ಆಸ್ತಿ ಖಾತಾ ಸಂಖ್ಯೆ: 589, ನಾಗೊಂಡನಹಳ್ಳಿ ಗ್ರಾಮದ ಸರ್ವೆ ನಂ. 107(ಪಿ), 115/2, 1153, 115/4, 115/5, 116/3 ಮತ್ತು ಹಗದೂರು ಗ್ರಾಮದ ಸರ್ವೆ ನಂ. 30/6(ಪಿ), ವಾರ್ಡ್ ಸಂಖ್ಯೆ: 84, ವೈಟ್‌ಪೀಲ್ಡ್ ಉಪ–ವಿಭಾಗ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ಮಹದೇವಪುರ ವಲಯ, ಬೆಂಗಳೂರು ರ ಸ್ವತ್ತಿನಲ್ಲಿ ಟವರ್ – 1 ರ ವಿಂಗ್ – 1 & 2 ರಲ್ಲಿ 2ತಳ + ನೆಲ+ ಮೇಲಿನ 17 ಅಂತಸ್ತುಗಳು, ಟವರ್ – 2 ರ ವಿಂಗ್ – 3 ರಲ್ಲಿ ತಳ + ನೆಲ + ಮೇಲಿನ 14 ಅಂತಸ್ತುಗಳು, ವಿಂಗ್ – 4, 5 ಮತ್ತು 6 ರಲ್ಲಿ ತಳ + ನೆಲ + ಮೇಲಿನ + 17 ಅಂತಸ್ತುಗಳು ಮತ್ತು ತಳ + ನೆಲ + ಮೇಲಿನ 2 ಅಂತಸ್ತುಗಳ ಕ್ಲಬ್‌ಹೌಸ್ ಕಟ್ಟಡ, ಟವರ್ – 3 ರ ವಿಂಗ್ –7 ರಲ್ಲಿ ತಳ + ನೆಲ + ಮೇಲಿನ 17 ಅಂತಸ್ತುಗಳು ಮತ್ತು ವಿಂಗ್ – 8 ರಲ್ಲಿ ತಳ + ನೆಲ + ಮೇಲಿನ 14 ಅಂತಸ್ತುಗಳು, ಟವರ್ – 4 ರ ವಿಂಗ್ – 9, 10 ಮತ್ತು 11 ರಲ್ಲಿ 2 ತಳ + ನೆಲ + ಮೇಲಿನ 17 ಅಂತಸ್ತುಗಳಲ್ಲಿ 665 ಘಟಕಗಳು ಹಾಗೂ 74 EWS ಘಟಕಗಳೊಂದಿಗೆ ಒಟ್ಟಾರೆ 739 ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಸಂಖ್ಯೆ: ಬೆಂಅಪ್ರಾ/ನಯೋಸ/ಡಿಎಲ್‌ಪಿ–22/2018–19/1112/2019–20, ದಿನಾಂಕ: 22–10–2019 ರಂದು ವಸತಿಯೇತರ ಅಭಿವೃದ್ಧಿ ಯೋಜನಾ ನಕ್ಷೆಗೆ ಅನುಮೋದನೆಯನ್ನು ಪಡೆದುಕೊಂಡು ಅದರಂತೆ ಕಟ್ಟಡ ನಿರ್ಮಿಸಲು ಈ ಕಛೇರಿಯಿಂದ ಉಲ್ಲೇಖ (1) ರಂತೆ ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಪ್ರಸ್ತುತ ವಿಂಗ್ – 1 ರಿಂದ 8 ರ ವಸತಿ ಸಮುಚ್ಚಯ ಉಪಯೋಗದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಉಲ್ಲೇಖ (2) ರಲ್ಲಿ ಸಲ್ಲಿಸಿರುವ ಪ್ರಸ್ತಾವನೆಗೆ ಸಂಬಂಧಿಸಿದಂತೆ, ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಿಸುತ್ತಿರುವುದನ್ನು ಪರಿವೀಕ್ಷಿಸಲಾಗಿದೆ.

ಅಪರ ನಿರ್ದೇಶಕರು ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 07–06–2022 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಸಂಬಂಧ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕ ರೂ. 8,44,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000038 ದಿನಾಂಕ: 14–06–2022 ರಂದು ಸಂದಾಯ ಮಾಡಿರುವುದರಿಂದ, ವಿಂಗ್ – 1 ರಿಂದ 8 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ಮಂಜೂರಾತಿಯ ಸಿಂಧುತ್ವವು ಉಲ್ಲೇಖ (2) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.
4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
5. ನಿವೇಶನದ ಖಾತಾ ವಿಭಜನೆ, ದಾಖಲಾತಿಗಳನ್ನು / ಸ್ವತ್ತಿನ ಹಕ್ಕನ್ನು ಬದಲಾಯಿಸಿದಲ್ಲಿ ಮತ್ತು ಯಾವುದೇ ರೀತಿ ದಾಖಲಾತಿಗಳನ್ನು ಅಥವಾ ವಾಸ್ತವಾಂಶ ಮರೆಮಾಚಿದಲ್ಲಿ ಅರ್ಜಿದಾರರು ನೇರ ಹೊಣೆಯಾಗಿರುತ್ತಾರೆ ತಪ್ಪಿದ್ದಲ್ಲಿ ನೀಡಲಾದ ಕಟ್ಟಡ ನಕ್ಷೆ ಮಂಜೂರಾತಿಯು ತನ್ನಿಂದತಾನೇ ರದ್ದುಗೊಳ್ಳುತ್ತದೆ.
6. ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ಕ್ಕೆ ಬದ್ಧವಾಗಿರತಕ್ಕದ್ದು.
7. ಕಟ್ಟಡದಲ್ಲಿ ಉತ್ಪತ್ತಿಯಾಗುವ ಘನ ತ್ಯಾಜ್ಯವನ್ನು ಸಂಪೂರ್ಣವಾಗಿ ಸಂಸ್ಕರಿಸಿ ಬಳಸಿಕೊಳ್ಳುವಂತಹ ಸಂಸ್ಕರಣಾ ಘಟಕವನ್ನು ಸ್ಥಾಪಿಸಿ ಅದನ್ನು ನಿರ್ವಹಿಸುವ ಮುಖಾಂತರ Zero Waste Discharge ಮಾಡಲು ಕ್ರಮಕೈಗೊಳ್ಳುವುದು.
8. ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.
9. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಬಳಸಿಕೊಳ್ಳುವುದು.
10. ವಿವಿಧ ಇಲಾಖೆಗಳಿಂದ ಪಡೆದಿರುವ ನಿರಾಕ್ಷೇಪಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತುಗಳನ್ನು ಪಾಲಿಸುವುದು.
11. ಮಂಜೂರಾತಿ ನಕ್ಷೆಯನ್ವಯ ಇನ್ನುಳಿದ ವಿಂಗ್‌ಗಳ ಕಟ್ಟಡದ ಕಾಮಗಾರಿಯನ್ನು ಪ್ರಾರಂಭಿಸಿ ಈ ಕಛೇರಿಯಿಂದ ಪ್ರಾರಂಭಿಕ ಪ್ರಮಾಣಪತ್ರ ಪಡೆಯತಕ್ಕದ್ದು.

16/06/22

ಸಹಿ /-
**ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಗೆ,

ಮೆ॥ ಶೋಭ ಲಿ.,
ಶೋಭ, ಸರ್ಜಾಪುರ – ಮಾರತ್‌ಹಳ್ಳಿ ಹೊರವರ್ತುಲ ರಸ್ತೆ,
ಬೆಳ್ಳಂದೂರು ಪೋಸ್ಟ್, ಬೆಂಗಳೂರು– 560 103.

**ಪ್ರತಿಯನ್ನು:**

1. ಕಾರ್ಯಪಾಲಕ ಅಭಿಯಂತರರು (ಮಹದೇವಪುರ-ವಿಭಾಗ), ಸಹಾಯಕ ಕಾರ್ಯಪಾಲಕ ಅಭಿಯಂತರರು, (ವೈಟ್‌ಫೀಲ್ಡ್ ಉಪ-ವಿಭಾಗ) ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.
2. ಕಛೇರಿ ಪ್ರತಿ.

True Copy

27/06/22

16/06/2022

**ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

15/6/22 15/6/22 15/6